ನಿ– 72
ಕ್ರಿ.ಸು –100

ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 186 ಜಿಇಎಲ್ 2021(ಇ)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ: 30/11/2021

**ಇವರಿಂದ:**

ಸರ್ಕಾರದ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ,
ವಿಕಾಸಸೌಧ, ಬೆಂಗಳೂರು.

**ಇವರಿಗೆ:**

ಕಾರ್ಯದರ್ಶಿಗಳು,
ಕರ್ನಾಟಕ ವಿಧಾನ ಪರಿಷತ್ ಸಚಿವಾಲಯ,
ವಿಧಾನಸೌಧ, ಬೆಂಗಳೂರು.

**ಮಾನ್ಯರೇ,**

**ವಿಷಯ:** ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಆರ್.ಪ್ರಸನ್ನ ಕುಮಾರ್ ರವರು ನಿಯಮ 72ರ ಮೇರೆಗೆ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ ಕಳುಹಿಸುವ ಬಗ್ಗೆ.

**ಉಲ್ಲೇಖ:** ಕವಿಪ/ ಪ್ರಶಾ/ 100/ 144ನೇಅ/ ನಿ–72/2020, ದಿನಾಂಕ: 14/09/2021.

** ** **

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಆರ್.ಪ್ರಸನ್ನ ಕುಮಾರ್ ರವರು ನಿಯಮ 72ರ ಮೇರೆಗೆ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರದ 25 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

ಲಕ್ಷ್ಮೀಕಾಂತ್. ಟಿ

(ಲಕ್ಷ್ಮೀಕಾಂತ್.ಟಿ)
ಶಾಖಾಧಿಕಾರಿ,
(ಎಂ.ಎ–2 ಶಾಖೆ),
ನಗರಾಭಿವೃದ್ಧಿ ಇಲಾಖೆ.

# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ.ಆರ್.ಪ್ರಸನ್ನಕುಮಾರ್ ಇವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಉತ್ತರ.

**ವಿಷಯ:**

ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ಮತ್ತು ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ ತಿದ್ದುಪಡಿಯಾದಂತೆ 2021-22 ಸಾಲಿನಿಂದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿ ತೆರಿಗೆಯನ್ನು ವಿಧಿಸುವಾಗ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಆರ್ಥಿಕವಾಗಿ ಹಿಂದುಳಿದಿರುವ ಹಾಗೂ ಕೊಳಚೆ ಪ್ರದೇಶದಲ್ಲಿ ವಾಸ ಮಾಡುವ ಕಡು ಬಡವರನ್ನು ಪರಿಗಣನೆಗೆ ತೆಗೆದುಕೊಳ್ಳದೆ, ಎಲ್ಲಾ ಜನರಿಗೂ ಅನ್ವಯವಾಗುವಂತೆ ಈ ಹಿಂದಿನ ಸಾಲುಗಳಿಗಿಂತ ದುಪ್ಪಟ್ಟು ತೆರಿಗೆಯನ್ನು ಪಾವತಿಸಲು ನಿಗಧಿಮಾಡಿ ಬಲವಂತವಾಗಿ ವಸೂಲು ಮಾಡುತ್ತಿರುವ ಈ ವಿಷಯವು ಸಾರ್ವಜನಿಕವಾಗಿ ಮಹತ್ವವಾಗಿರುವುದರಿಂದ ಈ ಬಗ್ಗೆ ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ 2002-03ನೇ ಸಾಲಿನಿಂದ ಸ್ವಯಂಘೋಷಿತ ಆಸ್ತಿ ತೆರಿಗೆ ಪದ್ಧತಿಯನ್ನು ಜಾರಿಗೊಳಿಸಲಾಗಿದೆ. 2005-06ನೇ ಸಾಲಿನ ಮಾರುಕಟ್ಟೆ ಮಾರ್ಗಸೂಚಿ ಬೆಲೆಗಳ ಆಧಾರದ ಮೇಲೆ ಆಸ್ತಿ ತೆರಿಗೆಯನ್ನು ನಿರ್ಧರಣೆ ಮಾಡಲಾಗುತ್ತಿತ್ತು ಹಾಗೂ ಪ್ರತಿ ಮೂರು ವರ್ಷಗಳಿಗೊಮ್ಮೆ ಆಸ್ತಿ ತೆರಿಗೆಯನ್ನು ಪರಿಷ್ಕರಣೆ ಮಾಡಲಾಗುತ್ತಿತ್ತು.

ಕರ್ನಾಟಕ ರಾಜ್ಯವು ಜಿ.ಎಸ್.ಡಿ.ಪಿ ಯ ಶೇ.0.25 ರಷ್ಟು ಹೆಚ್ಚುವರಿ ಹಣ ಸಾಲ ಪಡೆಯಲು ಮತ್ತು 15ನೇ ಹಣಕಾಸು ಆಯೋಗದ ಅನುದಾನ, ಸ್ವಚ್ಛ ಭಾರತ್ ಮಿಷನ್ ಅನುದಾನ ಪಡೆಯುವ ನಿಟ್ಟಿನಲ್ಲಿ ಅರ್ಹರಾಗಲು ಮತ್ತು ನಗರ ಸ್ಥಳೀಯ ಸಂಸ್ಥೆಗಳನ್ನು ಆರ್ಥಿಕವಾಗಿ ಸಧೃಡಗೊಳಿಸುವ ನಿಟ್ಟಿನಲ್ಲಿ ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ಮತ್ತು ಕರ್ನಾಟಕ ಪೌರನಿಗಮಗಳ ಅಧಿನಿಯಮ 1976ಕ್ಕೆ ತಿದ್ದುಪಡಿ ತರಲಾಗಿದೆ. 2021-22ನೇ ಸಾಲಿನಿಂದ ಚಾಲ್ತಿ ಸಾಲಿನ ಮಾರುಕಟ್ಟೆ ಮಾರ್ಗಸೂಚಿ ಬೆಲೆಗಳ ಶೇ.25ರಷ್ಟನ್ನು ಮಾತ್ರ ಪರಿಗಣಿಸಿ ಆಸ್ತಿ ತೆರಿಗೆಯನ್ನು ನಿರ್ಧರಣೆ ಮಾಡಿ, ವಿಧಿಸಲಾಗುತ್ತಿದೆ.

ಪೌರಾಡಳಿತ ನಿರ್ದೇಶನಾಲಯದ ಸುತ್ತೋಲೆ ಸಂ:292724/ಡಿಎಂಎ/ಡಿಇವಿ/ಟ್ಯಾಕ್ಸ್-3/2020 ದಿನಾಂಕ:19-02-2021ರಲ್ಲಿ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರಿಗೆ ಆಸ್ತಿ ತೆರಿಗೆ ನಿರ್ಧರಣೆ ಮಾಡುವ ಕುರಿತು ನಿರ್ದೇಶನ ನೀಡಲಾಗಿದ್ದು, ಕೊವಿಡ್-19ರ ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ಪ್ರಸ್ತುತ ಇರುವ ಆಸ್ತಿ ತೆರಿಗೆಗಿಂತ ಹೆಚ್ಚಿಗೆ ಹೊರೆಯಾಗದಂತೆ ಮತ್ತು ಅದರಲ್ಲೂ ಪ್ರಮುಖವಾಗಿ ಕೊಳಚೆ ಪ್ರದೇಶಗಳು ಹಾಗೂ ಆರ್ಥಿಕವಾಗಿ ಹಿಂದುಳಿದವರು ವಾಸಿಸುವ ಪ್ರದೇಶಗಳಲ್ಲಿ ಹೆಚ್ಚಿನ ಹೊರೆಯಾಗದಂತೆ ಆಸ್ತಿ ತೆರಿಗೆ ನಿಗಧಿಪಡಿಸಲು ನಿರ್ದೇಶಿಸಲಾಗಿದೆ.

2021-22ನೇ ಸಾಲಿನಲ್ಲಿ ವಿಧಿಸಲಾಗುವ ಆಸ್ತಿ ತೆರಿಗೆಯು ನಾಗರಿಕರಿಗೆ ಹೊರೆಯಾಗಬಾರದೆಂಬ ಉದ್ದೇಶದಿಂದ ಆಸ್ತಿ ತೆರಿಗೆ ಲೆಕ್ಕಾಚಾರಕ್ಕೆ ಚಾಲ್ತಿ ಸಾಲಿನ ಮಾರುಕಟ್ಟೆ ಬೆಲೆಗಳ ಶೇ.25 ರಷ್ಟನ್ನು ಮಾತ್ರ ಪರಿಗಣಿಸಲಾಗಿರುತ್ತದೆ ಹಾಗೂ ವಾಸದ ಉದ್ದೇಶದ ಕನಿಷ್ಠ ತೆರಿಗೆದರದ ಪ್ರಮಾಣವನ್ನು 0.3 ರಿಂದ 0.2ಕ್ಕೆ ಕಡಿಮೆ ಮಾಡಲಾಗಿರುತ್ತದೆ. ನಗರ ಸ್ಥಳೀಯ ಸಂಸ್ಥೆಗಳು ಚಾಲ್ತಿ ಸಾಲಿನಲ್ಲಿ ನಿಗಧಿಪಡಿಸಿರುವ ಆಸ್ತಿ ತೆರಿಗೆ ಮಾಹಿತಿಯನ್ನು ಪರಿಶೀಲಿಸಲಾಗಿ, ಬಹುತೇಕ ನಗರ ಸ್ಥಳೀಯ ಸಂಸ್ಥೆಗಳು ಹಿಂದಿನ ವರ್ಷದಲ್ಲಿ ನಿಗಧಿಪಡಿಸಿದ ಆಸ್ತಿ ತೆರಿಗೆಯ ಬೇಡಿಕೆಗೂ ಹಾಗೂ ಚಾಲ್ತಿ ಸಾಲಿಗೆ ನಿಗಧಿಪಡಿಸಿರುವ ಆಸ್ತಿ ತೆರಿಗೆಯ ಬೇಡಿಕೆಗೆ ಹೆಚ್ಚಿನ ವ್ಯತ್ಯಾಸವಿರುವುದಿಲ್ಲ.

ಸಂಖ್ಯೆ: ನಅಇ 186 ಜಿಇಎಲ್ 2021(ಇ)

(ಎನ್.ನಾಗರಾಜ್ ಎಂಟಿಬಿ)
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು